ಆ) ಹಾಗಿದ್ದಲ್ಲಿ ಸರ್ಕಾರವು ಈ ದಿಶೆಯಲ್ಲಿ ಕೈಗೊಂಡಿರುವ ಕ್ರಮಗಳೇನು;

ಇ) ಕುಡಿಯುವ ನೀರಿನ ವಿತರಣಾ ವ್ಯವಸ್ಥೆಯನ್ನು ಬಲಪಡಿಸುವ ಮತ್ತು ಆಧುನೀಕರಣಗೊಳಿಸುವ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎಸ್. ಎಂ. ಕೃಷ್ಣ (ಮುಖ್ಯ ಮಂತ್ರಿಗಳು) :

ಅ) ಹೌದು.

ಆ) ಮಂಡ್ಯ ನಗರದ ನೀರು ಸರಬರಾಜು ವಿತರಣಾಜಾಲದ ಆಧುನೀಕರಣ ಮತ್ತು ಮೊದಲನೇ ಹಂತದ ನೀರು ಸರಬರಾಜು ಯೋಜನೆಯ ಪುನರುಜ್ಜೀವನಗೊಳಿಸುವ ಯೋಜನೆಗೆ ರೂ. 675 ಲಕ್ಷಗಳಿಗೆ ಅಂದಾಜನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿದ್ದು, ಪರಿಶೀಲನೆಯಲ್ಲಿದೆ.

ಇ) ಪರಿಶೀಲನೆಯಲ್ಲಿದೆ.

ಪ್ರತಿ ಜಿಲ್ಲಾ ಎಸ್.ಪಿ. ಕಛೇರಿಯಲ್ಲಿ ಪಾಸ್‌ಪೋರ್ಟ್ ನೀಡುವ ಅಧಿಕಾರದ ಬಗ್ಗೆ

12 (274) : ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಾಸ್‌ಪೋರ್ಟ್ ಕಛೇರಿಗಳು ಎಷ್ಟಿವೆ;

ಆ) ಆಯಾ ಜಿಲ್ಲೆಗಳಲ್ಲಿ ಎಸ್.ಪಿ.ಯವರಿಗೆ ಪಾಸ್‌ಪೋರ್ಟ್ ನೀಡುವ ಅಧಿಕಾರ ಕೊಡುವ ಕುರಿತು ಸರ್ಕಾರದ ಕ್ರಮ ಕೈಗೊಂಡಿದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ)

ಅ) ರಾಜ್ಯದಲ್ಲಿ ಒಂದು ರಿಜಿನಲ್ ಪಾಸ್‌ಪೋರ್ಟ್ ಕಛೇರಿ, ಬೆಂಗಳೂರಿನಲ್ಲಿದೆ. (ಈ ಕಛೇರಿ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರುತ್ತದೆ).

ಆ) ಉದ್ಭವಿಸುವುದಿಲ್ಲ.

ಉತ್ತರ ಕರ್ನಾಟಕ ಭಾಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ಕುರಿತು

14 (277) : ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉತ್ತರ ಕರ್ನಾಟಕದ ಭಾಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ವಿಚಾರ ಈಗ ಯಾವ ಹಂತದಲ್ಲಿದೆ;

ಆ) ಹೈಕೋರ್ಟ್ ಪೀಠ ಸ್ಥಾಪನೆ ವಿಚಾರದಲ್ಲಿ ನ್ಯಾಯಮೂರ್ತಿಗಳ ಸಮಿತಿ ನೀಡಿರುವ ವರದಿಯ ಪ್ರಮುಖ ಅಂಶಗಳೇನು;

ಇ) ನ್ಯಾಯಮೂರ್ತಿಗಳ ಸಮಿತಿ ಯಾವಾಗ ವರದಿ ನೀಡಿದೆ; ವರದಿ ನೀಡಿ ಇಷ್ಟು ದಿನಗಳು ಕಳೆದರೂ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು;

ಈ) ಹೈಕೋರ್ಟ್ ಪೀಠ ಸ್ಥಾಪನೆ ವಿಚಾರದಲ್ಲಿ ಸರ್ಕಾರದ ನಿಲುವೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು) :

ಅ) ಗೌರವಾನ್ವಿತ ಮುಖ್ಯ ನ್ಯಾಯಾಧೀಶರ ಪರಿಶೀಲನೆಯಲ್ಲಿದೆ.

ಆ) ಈ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇಲ್ಲ.

ಇ) ನ್ಯಾಯಮೂರ್ತಿಗಳ ಸಮಿತಿ ದಿನಂಕ: 6-6-2003 ರಂದು ಗೌರವಾನ್ವಿತ ಮುಖ್ಯ ನ್ಯಾಯಾಧೀಶರಿಗೆ ವರದಿ ನೀಡಿದ್ದು ವರದಿಯಲ್ಲಿನ ಅಂಶಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇಲ್ಲ.